## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-2020-21ನೇ ಸಾಲಿನಲ್ಲಿ ನವೆಂಬರ್ 2020 ರಿಂದ ಫೆಬ್ರವರಿ 2021 ವರೆಗೆ 4 ತಿಂಗಳ ವೇತನ ಬಿಡುಗಡೆ ಮಾಡಲು ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಆಇ 2 ಟಿಎಫ್‌ಪಿ 2020, ದಿ:01.04.2020.
2. ಸರ್ಕಾರದ ಆದೇಶ ಸಂಖ್ಯೆ: ಆಇ 2 ಟಿಎಫ್‌ಪಿ 2020, ದಿ:28.04.2020.
3. ಸರ್ಕಾರದ ಆದೇಶ ಸಂಖ್ಯೆ: ಆಇ 2 ಟಿಎಫ್‌ಪಿ 2020, ದಿ:30.05.2020.

ಪ್ರಸ್ತಾವನೆ:-

ಮೇಲೆ (1)(2) ಮತ್ತು (3) ರಲ್ಲಿ ಓದಲಾದ ಆದೇಶಗಳಲ್ಲಿ 2020-21 ನೇ ಸಾಲಿಗೆ ಅಕ್ಟೋಬರ್ ವರೆಗಿನ ವೇತನ ಸೆಳೆಯಲು (ಮಾರ್ಚ್ 2020 ರ ವೇತನ ಸೇರಿದಂತೆ) ಸರ್ಕಾರದ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ಮಾಡಲಾಗಿತ್ತು. ವೇತನಗಳನ್ನು ಯಾವುದೇ ವಿಳಂಬವಿಲ್ಲದೆ ಸೆಳೆಯಲು ಅನುವಾಗುವಂತೆ, ನವೆಂಬರ್ 2020 ರಿಂದ ಫೆಬ್ರವರಿ 2021 ರವರೆಗಿನ ವೇತನದ ಬಾಬ್ತು ಅನುದಾನ ಬಿಡುಗಡೆ ಮಾಡಲು ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ನೀಡಲು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂ: ಎಫ್‌ಡಿ: 4 ಟಿಎಫ್‌ಪಿ: 2020, ದಿನಾಂಕ:27-10-2020.**

ಆರ್ಥಿಕ ಇಲಾಖೆಯ ಸಹಮತಿ ಇದೆಯೆಂದು ಭಾವಿಸಿ ನವೆಂಬರ್ 2020 ರಿಂದ ಫೆಬ್ರವರಿ 2021 ರವರೆಗೆ ನಾಲ್ಕು ತಿಂಗಳ ವೇತನವನ್ನು ಉದ್ದೇಶಿತ ಲೆಕ್ಕ ಶೀರ್ಷಿಕೆ 001, 002, 003, 004, 011, 014 ಮತ್ತು 020 ಗಳಡಿ ಬಿಡುಗಡೆ ಮಾಡಲು ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಿದೆ.

2020-21ನೇ ಸಾಲಿಗೆ ಬಿಡುಗಡೆ ಮಾಡಿದ ಮೊತ್ತದಲ್ಲಿ ಯಾವುದೇ ಕಾರಣಕ್ಕೆ ಹಿಂದಿನ ಸಾಲುಗಳ ವೇತನ ಸೆಳೆಯುವಂತಿಲ್ಲ. ಆದರೆ, ಈ ವರ್ಷದ ಪೂರ್ಣ ವೇತನ ಸೆಳೆಯಲು ಕೊರತೆಯಾಗದಂತೆ ಹಿಂದಿನ ಸಾಲುಗಳ ವೇತನ ಬಾಕಿ ಮೊತ್ತವನ್ನು ಸೆಳೆಯಲು ಅನುದಾನ ಲಭ್ಯವಿದ್ದಲ್ಲಿ ಮಾತ್ರ ಸಂಬಂಧಿಸಿದ ಹಣ

ಸೆಳೆಯುವ ಅಧಿಕಾರಿಯವರು ಈ ಬಗ್ಗೆ ದೃಢೀಕರಿಸಿ ಬಾಕಿ ವೇತನ ಸೆಳೆಯಲು ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸುವಂತೆ ಆದೇಶಿಸಿದೆ.

2020-21ನೇ ಸಾಲಿನಲ್ಲಿ ಮಾರ್ಚ್ 2021 ರ ವೇತನ ಹೊರತುಪಡಿಸಿ ಯಾವುದೇ ವೇತನ ಬಾಕಿಯನ್ನು 2021-22 ನೇ ಸಾಲಿಗೆ ಉಳಿಸಿಕೊಳ್ಳದಂತೆ ಸಂಬಂಧಿಸಿದ ಡಿ.ಡಿ.ಓ. ರವರು ಖಚಿತಪಡಿಸಿಕೊಳ್ಳತಕ್ಕದ್ದು, ಹಿಂದಿನ ಸಾಲುಗಳ ಬಾಕಿ ವೇತನ ಸೆಳೆಯಲು ಕೊರತೆಯಾದಲ್ಲಿ ಆರ್ಥಿಕ ಇಲಾಖೆಯನ್ನು ಸಂಪರ್ಕಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

Ekroop Caur 27/10

(ಡಾ॥ ಏಕ್‌ರೂಪ್ ಕೌರ್)

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಆ ಮತ್ತು ಸಂ)
ಆರ್ಥಿಕ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369. ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿಎಸ್‌ಎಸ್‌ಎ), ರೆಸಿಡೆನ್ಸಿ ರಸ್ತೆ, ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ.ಆರ್.ಎಸ್.ಎ), ರೆಸಿಡೆನ್ಸಿ ರಸ್ತೆ, ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
9. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು, ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು.
11. ಆರ್ಥಿಕ ಇಲಾಖೆಯ ಎಲ್ಲಾ ಶಾಖೆಗಳಿಗೆ.
12. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
13. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
14. ಬಿಡಿ ಪ್ರತಿ / ಶಾ.ರ.ಕ.